**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ : 2009-10ರ ಸಾಲಿನಲ್ಲಿ ರಾಜ್ಯ ವಲಯದ NRWSP/MNPಯಡಿ ಗ್ರಾಮೀಣ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನಕ್ಕಾಗಿ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ಸರ್ಕಾರದ ಆದೇಶ ಸಂ:ಗ್ರಾಅಪ 12 ಗ್ರಾನೀಸ(2) 09 ದಿ:15.4.2009.

**ಪೀಠಿಕೆ:**

2009-10ರ ಸಾಲಿಗೆ ಚಾಲ್ತಿ ಮಾರ್ಗದರ್ಶಿಗಳನ್ವಯ ಅನುಮೋದಿತ ಕ್ರಿಯಾ ಯೋಜನೆಯನ್ವಯ ಅನುಷ್ಠಾನಗೊಳಿಸಬೇಕಾದ ಗ್ರಾಮೀಣ ನೀರು ಸರಬರಾಜು ಯೋಜನೆಗಳ ಸಲುವಾಗಿ ಹಾಗೂ ತುರ್ತು ಕುಡಿಯುವ ನೀರಿನ ಯೋಜನೆಗಳ ಬಾಬ್ತಿಗಾಗಿ ಹಣ ಬಿಡುಗಡೆ ಮಾಡುವ ಅವಶ್ಯಕತೆಯಿದೆ. ಜೊತೆಗೆ 2008-09ರ ಸಾಲಿನಲ್ಲಿ ಕೇಂದ್ರ ವಲಯದಡಿ ರಾಜ್ಯಕ್ಕೆ ಬಂದ ಅನುದಾನಕ್ಕೆ ಪೂರಕವಾಗಿ NRWSP/MNP ಯಡಿ ಕಡ್ಡಾಯವಾಗಿ ನೀಡಬೇಕಾಗಿದ್ದ ಅನುದಾನದ ಪೈಕಿ ರೂ.139 ಕೋಟಿ ಕೊರತೆಯಾಗಿರುತ್ತದೆ. ಸದರಿ ಕೊರತೆ ಸರಿದೂಗಿಸಲು ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಲಭ್ಯವಾಗುವ ಅನುದಾನದಡಿ ಕ್ರಮವಹಿಸಲು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 973 ವೆಚ್ಚ-6/2009 ದಿ:25.3.2009ರಲ್ಲಿ ಸಹಮತಿಸಿದೆ. ಅಂತೆಯೇ ಪ್ರಸಕ್ತ ಸಾಲಿಗೆ MNP ಸಾಮಾನ್ಯ ಗ್ರಾಮೀಣ ನೀರು ಸರಬರಾಜು ಬಾಬ್ತಿಗಾಗಿ ಲಭ್ಯವಿರುವ ಅನುದಾನದ ಪೈಕಿ ರೂ.40 ಕೋಟಿಗಳನ್ನು ರಾಜ್ಯದ 29 ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡಲು ನಿರ್ಧರಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 14 ಗ್ರಾನೀಸ (2) 09, ಬೆಂಗಳೂರು, ದಿನಾಂಕ:25.04.2009**

ಪೀಠಿಕೆಯಲ್ಲಿನ ಅಂಶಗಳನ್ನು ಪರಿಶೀಲಿಸಿ ರಾಜ್ಯದ ಎಲ್ಲಾ 29 ಜಿಲ್ಲಾ ಪಂಚಾಯತ್‌ಗಳಿಗೆ ಈ ಆದೇಶಕ್ಕೆ ಲಗತ್ತಿಸಿರುವ **ಅನುಬಂಧ-1ರಲ್ಲಿ** ಹೇಳಿರುವಂತೆ **ರೂ.39.80 ಕೋಟಿಗಳನ್ನು** (ಮೂವತ್ತೊಂಭತ್ತು ಕೋಟಿ ಎಂಭತ್ತು ಲಕ್ಷ ರೂಪಾಯಿಗಳು ಮಾತ್ರ) ಗ್ರಾಮೀಣ ನೀರು ಸರಬರಾಜು ಯೋಜನೆಗಳ ಅನುಷ್ಠಾನ ಸಲುವಾಗಿ ರಾಜ್ಯ ವಲಯದ NRWSP (MNP)ಯಡಿ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳು ಈ ಆದೇಶದಲ್ಲಿ ಬಿಡುಗಡೆಯಾಗಿರುವ ಅನುದಾನವನ್ನು ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ/7/ಜೆಡ್‌ಪಿಎ/03 ದಿನಾಂಕ:14.7.2005ರನ್ವಯ ಖಜಾನೆಯಿಂದ ಪಡೆದು ಉದ್ದೇಶಿತ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನ ಸಲುವಾಗಿ ಮಾತ್ರ ಆಯಾ ಯೋಜನಾ ಮಾರ್ಗದರ್ಶಿಗಳನ್ವಯ ವೆಚ್ಚ ಭರಿಸತಕ್ಕದ್ದು. ಇತರೆ ಉದ್ದೇಶಗಳಿಗಾಗಿ ಮಾರ್ಗಪಲ್ಲಟ ಮಾಡತಕ್ಕದ್ದಲ್ಲ.

3. ಸದರಿ ಅನುದಾನವನ್ನು ಈಗಾಗಲೇ ಅನುಮೋದನೆಯಾಗಿ ಮುಂದುವರಿದಿರುವ ಕುಡಿಯುವ ನೀರಿನ ಯೋಜನೆಗಳಿಗೆ, ಪೂರ್ಣಗೊಂಡಿರುವ ಯೋಜನೆಗಳ ಬಾಕಿ ಬಿಲ್ಲು ಪಾವತಿಗಾಗಿ, ಅನುಮೋದಿತ ಕ್ರಿಯಾ ಯೋಜನೆಯನ್ವಯ ಚಾಲ್ತಿ ಪಾರದರ್ಶಕ ನೀತಿಯನುಸಾರ ಕೈಗೆತ್ತಿಕೊಳ್ಳಬೇಕಾದ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನ ಸಲುವಾಗಿ ಮಾತ್ರ ವಿನಿಯೋಗಿಸಬಹುದಾಗಿದೆ.

4. ಪ್ರಗತಿ ವರದಿಯನ್ನು ಹಾಗೂ ಹಣ ಬಳಕೆ ಪ್ರಮಾಣ ಪತ್ರವನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-20 ಇವರಿಗೆ ಹಾಗೂ ಸರ್ಕಾರಕ್ಕೆ ಸಲ್ಲಿಸುವುದು.

5. ಜಿಲ್ಲಾ ಪಂಚಾಯತ್‌ಗಳು ಈ ವೆಚ್ಚವನ್ನು ಲೆಕ್ಕಶೀರ್ಷಿಕೆ 4215-ನೀರು ಸರಬರಾಜು ಮತ್ತು ನೈರ್ಮಲ್ಯ ಮೇಲಣ ವೆಚ್ಚ-01-ನೀರು ಸರಬರಾಜು-102-ಗ್ರಾಮೀಣ ನೀರು ಸರಬರಾಜು-9-ಟೆಸ್ಟ್-01-ಟೆಸ್ಟ್ ಗ್ರಾಮೀಣ ನೀರು ಸರಬರಾಜು-059-ಬಂಡವಾಳ ವೆಚ್ಚಗಳು (ಯೋಜನೆ) 2009-10ರಡಿ ಭರಿಸತಕ್ಕದ್ದು. (4215-01-102-9-01-059)

6. ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 973 ವೆಚ್ಚ-6/2009 ದಿ:25.3.2009ರಲ್ಲಿನ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

( ಪಿ.ಎ.ಮೇಘಣ್ಣವರ )
ನಿರ್ದೇಶಕರು (ಗ್ರಾಮೂಸೌ) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು :

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಚೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ
9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ,ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಸಂಕೀರ್ಣ,ಅಭಯ ಸಂಕೀರ್ಣ,4ನೇ ಮಹಡಿ,ನಂ.55,ರೆಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-20.
12. ಎಲ್ಲಾ (29) ಜಿಲ್ಲಾಪಂಚಾಯತ್‌ಗಳ ಅಧ್ಯಕ್ಷರು.
13. ಎಲ್ಲಾ(29) ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು.
14. ಎಲ್ಲಾ (8) ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರುಗಳು.
15. ಎಲ್ಲಾ (38) ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್‌ಗಳು
16. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, ಆನಂದರಾವ್ ವೃತ್ತ ,ಬೆಂಗಳೂರು-10.
17. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ ಇಲಾಖೆ, ಬೆಂಗಳೂರು
18. ಉಪನಿರ್ದೇಶಕರು, ನೆಟ್‌ವರ್ಕ್‌ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂ.
19. ಎಲ್ಲಾ ಜಿಲ್ಲೆಯ ಜಿಲ್ಲಾ ಖಜಾನಾಧಿಕಾರಿಗಳು.
20. ಸಹ ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
21. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) ಇವರುಗಳ ಆಪ್ತ ಕಾರ್ಯದರ್ಶಿ/ನಿರ್ದೇಶಕರು, KRWSSA ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ/ ನಿರ್ದೇಶಕರು (ಗ್ರಾಮೂಸೌ) E/o ಸರ್ಕಾರದ ಜಂಟಿ ಕಾರ್ಯದರ್ಶಿ/ನಿರ್ದೇಶಕರು (ಗ್ರಾಮ ಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, ಇವರುಗಳ ಆಪ್ತ ಸಹಾಯಕರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ ''ಕರ್ನಾಟಕ ವಿಕಾಸ'' ಗ್ರಾಅ ಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು)
24. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ - 10 ಪ್ರತಿಗಳು.
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ) 26. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.